ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ಗ್ರಾಮೀಣ ವಸತಿ ಯೋಜನೆ ಕುರಿತು

ಶ್ರೀ ಸುನೀಲ್ ಗೌಡ ಬಸನಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

372 (357) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಗಳಿಗೆ ವಿವಿಧ ಗ್ರಾಮೀಣ ವಸತಿ ಯೋಜನೆಗಳ ಅಡಿಯಲ್ಲಿ ಕಳೆದ 5 ವರ್ಷಗಳಲ್ಲಿ ಮಂಜೂರಾದ ಒಟ್ಟು ಮನೆಗಳ ಸಂಖ್ಯೆ ಎಷ್ಟು; (ವರ್ಷವಾರು ಮತ್ತು ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಆ) ಸದರಿ ಮನೆಗಳಿಗೆ ಬಿಡುಗಡೆಯಾದ ಅನುದಾನ ಎಷ್ಟು ಹಾಗೂ ಬಿಡುಗಡೆಗೆ ಬಾಕಿ ಇರುವ ಅನುದಾನ ಎಷ್ಟು; (ವರ್ಷವಾರು ಮತ್ತು ಗ್ರಾಮ ಪಂಚಾಯತಿವಾರು ಮಾಹಿತಿ ನೀಡುವುದು)

(ಇ) ವಸತಿ ಯೋಜನೆಗಳಿಗೆ ಅನುದಾನ ಬಿಡುಗಡೆ ಮಾಡಲು ಅನುದಾನದ ಕೊರತೆ ಇದೆಯೇ; ಅನುದಾನದ ಕೊರತೆ ಇಲ್ಲದಿದ್ದಲ್ಲಿ, ಅನುದಾನ ಬಿಡುಗಡೆ ಮಾಡಲು ವಿಳಂಬ ಆಗಿರುವುದಕ್ಕೆ ಕಾರಣಗಳೇನು;

(ಈ) ಗ್ರಾಮೀಣ ಬಡ ಜನರು ವಿವಿಧ ಕಾರಣಗಳಿಂದಾಗಿ ಮನೆಗಳನ್ನು ಕಟ್ಟಿಕೊಳ್ಳದಿರುವುದರಿಂದ ಹಲವಾರು ಮನೆಗಳು ಬ್ಲಾಕ್ ಆಗಿದ್ದು ಇಂತಹ ಬ್ಲಾಕ್ ಆಗಿರುವ ಒಟ್ಟು ಮನೆಗಳ ಸಂಖ್ಯೆಯನ್ನು ಗ್ರಾಮ ಪಂಚಾಯತಿವಾರು ವಿವರ ನೀಡುವುದು;

(ಉ) ಬ್ಲಾಕ್ ಆಗಿರುವ ಮನೆಗಳನ್ನು ತೆರವುಗೊಳಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; ಬ್ಲಾಕ್ ತೆರವುಗೊಳಿಸಿ ಫಲಾನುಭವಿಗಳಿಗೆ ಮನೆ ಕಟ್ಟಿಕೊಳ್ಳಲು ಒಂದು ಅವಕಾಶ ನೀಡುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ?